## ಪ್ರವಾಸೋದ್ಯಮ ಜನಪ್ರಿಯಗೊಳಿಸುವುದು

**2449(2808); ಶ್ರೀ ದೇವೇಗೌಡ ಜೆ.ಟಿ (ಚಾಮುಂಡೇಶ್ವರಿ)**

ಅ) ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಹೆಚ್ಚು ಜನಪ್ರಿಯಗೊಳಿಸಲು ಸರ್ಕಾರವು ಕೈಗೊಂಡಿರುವ ಯೋಜನೆಗಳಾವುವು (ಸಂಪೂರ್ಣ ಮಾಹಿತಿ ನೀಡುವುದು);

ಆ) ಕಳೆದ ಮೂರು ವರ್ಷಗಳಿಂದ ಪ್ರವಾಸೋದ್ಯಮಕ್ಕಾಗಿ ಕೇಂದ್ರದಿಂದ ಬಂದ, ರಾಜ್ಯ ಸರ್ಕಾರವು ನೀಡಿದ ಹಾಗೂ ಖರ್ಚು ಮಾಡಿದ ಅನುದಾನವೆಷ್ಟು (ವರ್ಷವಾರು, ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು);

**ಶ್ರೀ ಆರ್.ವಿ. ದೇಶ್‌ಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)**

ಅ) ರಾಜ್ಯದಲ್ಲಿರುವ ಪ್ರವಾಸಿ ತಾಣಗಳನ್ನು ಹೆಚ್ಚು ಜನಪ್ರಿಯಗೊಳಿಸಲು ಹಾಗೂ ಪ್ರವಾಸಿಗರನ್ನು ಆಕರ್ಷಿಸಲು ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

1. ಪ್ರವಾಸಿ ತಾಣಗಳನ್ನು ಕುರಿತಂತೆ ಆಕರ್ಷಕ ಪ್ರಚಾರ ಸಾಮಗ್ರಿಗಳ ಮುದ್ರಣ.
2. ಪ್ರಮುಖ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಸಂಚಿಕೆಗಳು ಹಾಗೂ ಪತ್ರಿಕೆಗಳಲ್ಲಿ ಪ್ರವಾಸಿ ತಾಣಗಳನ್ನು ಕುರಿತ ಜಾಹೀರಾತು ಪ್ರಕಟಿಸುವುದು.
3. ವಿದ್ಯುನ್ಮಾನ ಮಾಧ್ಯಮಗಳಲ್ಲಿ ಜಾಹೀರಾತು ಪ್ರಕಟಿಸುವುದು.
4. ಅಂತರಾಷ್ಟ್ರೀಯ ವಿಮಾನ ನಿಲ್ದಾಣಗಳಲ್ಲಿ ಜಾಹೀರಾತು ಪ್ರಕಟಿಸುವುದು.
5. ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಜರುಗುವ ಮೇಳಗಳು. ಟ್ರಾವೆಲ್ ಮಾರ್ಟ್‌ಗಳಲ್ಲಿ ಭಾಗವಹಿಸುವುದು ಹಾಗೂ ರೋಡ್‌ಶೋಗಳನ್ನು ಏರ್ಪಡಿಸುವುದು.

6. ಪ್ರಮುಖ ರೈಲು ನಿಲ್ದಾಣಗಳಲ್ಲಿ ಪ್ರವಾಸಿ ತಾಣಗಳನ್ನು ಕುರಿತಂತೆ ಜಾಹೀರಾತು ಪ್ರಕಟಿಸುವುದು, ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

7. ಪಾಟಾ ಪ್ರವಾಸಿ ಮೇಳ 2015 ನ್ನು ಈ ಬಾರಿ ಬೆಂಗಳೂರಿನಲ್ಲಿ ಆಯೋಜಿಸಲಾಗುತ್ತಿದ್ದು, ಸದರಿ ಪ್ರವಾಸಿ ಮೇಳದಲ್ಲಿ 60ಕ್ಕೂ ಅಧಿಕ ದೇಶಗಳ ಸುಮಾರು ಒಂದು ಸಾವಿರ ಪ್ರವಾಸೋದ್ಯಮ ಪ್ರತಿನಿಧಿಗಳು ಹಾಗೂ 300ಕ್ಕೂ ಅಧಿಕ ಬಂಡವಾಳ ಹೂಡಿಕೆದಾರರು ಭಾಗವಹಿಸಲಿದ್ದಾರೆ. ಇದರಿಂದಲೂ ರಾಜ್ಯದ ಪ್ರವಾಸೋದ್ಯಮ ವಲಯವು ಜಾಗತಿಕ ಮಟ್ಟದಲ್ಲಿ ಹೆಚ್ಚಿನ ಪ್ರಚಾರ ಪಡೆಯಲು ಸಹಾಯಕವಾಗಲಿದೆ.

ಆ) ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರವು ನೀಡಿದ ಮತ್ತು ಖರ್ಚಾದ ಅನುದಾನ ವಿವರ

(ರೂ. ಕೋಟಿಗಳಲ್ಲಿ)

| ಕ್ರ.ಸಂ. | ವರ್ಷ | ಕೇಂದ್ರವು ನೀಡಿದ ಅನುದಾನ | ಖರ್ಚಾದ ಅನುದಾನ |
|---|---|---|---|
| 1 | 2012 | – | – |
| 2 | 2013 | 16.40 | 10.78 |
| 3 | 2014 | – | – |
| | ಒಟ್ಟು | **16.40** | **10.78** |

ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರವು ನೀಡಿದ ಮತ್ತು ಖರ್ಚಾದ ಅನುದಾನ ವಿವರ

(ರೂ. ಕೋಟಿಗಳಲ್ಲಿ)

| ಕ್ರ.ಸಂ. | ವರ್ಷ | ರಾಜ್ಯವು ನೀಡಿದ ಅನುದಾನ | ಖರ್ಚಾದ ಅನುದಾನ |
|---|---|---|---|
| 1 | 2012 | 223.22 | 220.59 |

| | | | |
|---|---|---|---|
| 2 | 2013 | 320.52 | 303.48 |
| 3 | 2014 | 389.11 | 331.65 |
| | **ಒಟ್ಟು** | **932.85** | **855.72** |

* ಜಿಲ್ಲಾವಾರು ಅನುದಾನ ನಿಗದಿಪಡಿಸಿರುವುದಿಲ್ಲ.

**ಜಿಲ್ಲಾ ಪಂಚಯತ್ ರಸ್ತೆಗಳ ದುರಸ್ತಿ**

**2451(2810); ಶ್ರೀ ದೇವೇಗೌಡ ಬಿ.ಟಿ. (ಚಾಮುಂಡೇಶ್ವರಿ)**

ಅ) ಮೈಸೂರು ಚಾಮುಂಡೇಶ್ವರಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಜಿಲ್ಲಾ ಪಂಚಾಯತ್ ರಸ್ತೆಗಳು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ರಸ್ತೆಗಳನ್ನು ದುರಸ್ತಿ ಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು (ಸಂಪೂರ್ಣ ಮಾಹಿತಿ ನೀಡುವುದು)?

**ಶ್ರೀ ಎಚ್.ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)**

ಅ) ಚಾಮುಂಡೇಶ್ವರಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿಯ ಕೆಲವು ಗ್ರಾಮೀಣ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.